# ಫೆಡರಲ್ ರಿಪಬ್ಲಿಕ್ ಆಫ್ ನೈಜೀರಿಯಾದ ಅಧ್ಯಕ್ಷರೊಂದಿಗೆ ಪ್ರಧಾನ ಮಂತ್ರಿಯ ಸಭೆ

ಸೆಪ್ಟೆಂಬರ್ 10, 2023

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು 10 ಸೆಪ್ಟೆಂಬರ್ 2023 ರಂದು ನವದೆಹಲಿಯಲ್ಲಿ G20 ಶೃಂಗಸಭೆಯ ಸಂದರ್ಭದಲ್ಲಿ ಫೆಡರಲ್ ರಿಪಬ್ಲಿಕ್ ಆಫ್ ನೈಜೀರಿಯಾದ ಅಧ್ಯಕ್ಷರಾದ ಹೆಚ್  ಇ  ಶ್ರೀ ಬೋಲಾ ಅಹ್ಮದ್ ಟಿನುಬು ಅವರನ್ನು ಭೇಟಿಯಾದರು.

ಭಾರತದ G20 ಪ್ರೆಸಿಡೆನ್ಸಿಯ ಯಶಸ್ಸಿಗೆ ಅಧ್ಯಕ್ಷ ಟಿನುಬು ಪ್ರಧಾನಮಂತ್ರಿ ಅವರನ್ನು ಅಭಿನಂದಿಸಿದರು. G20 ನಲ್ಲಿ ಆಫ್ರಿಕನ್ ಯೂನಿಯನ್‌ನ ಶಾಶ್ವತ ಸದಸ್ಯತ್ವವನ್ನು ಖಾತ್ರಿಪಡಿಸಿದ್ದಕ್ಕಾಗಿ ಮತ್ತು ಜಾಗತಿಕ ದಕ್ಷಿಣದ ಹಿತಾಸಕ್ತಿಗಳನ್ನು ಉತ್ತೇಜಿಸಿದ್ದಕ್ಕಾಗಿ ಅವರು ಪ್ರಧಾನ ಮಂತ್ರಿಯವರಿಗೆ ಧನ್ಯವಾದ ಅರ್ಪಿಸಿದರು.

ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ, ಕೃಷಿ, ರಾಗಿ, ಹಣಕಾಸು ತಂತ್ರಜ್ಞಾನ ಮತ್ತು ಸಾಮರ್ಥ್ಯ ವೃದ್ಧಿ ಸೇರಿದಂತೆ ವ್ಯಾಪಕ ದ್ವಿಪಕ್ಷೀಯ ಸಹಕಾರದ ವಿವಿಧ ಕ್ಷೇತ್ರಗಳ ಕುರಿತು ಉಭಯ ನಾಯಕರು ಉತ್ಪಾದಕ ಮಾತುಕತೆ ನಡೆಸಿದರು.

**ನವ ದೆಹಲಿ**
**ಸೆಪ್ಟೆಂಬರ್ 10, 2023**